# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತನೆಯ ಅಧಿವೇಶನ

## (ಮುಂದುವರೆದ ಉಪವೇಶನಗಳು)

## <u>ಕಾರ್ಯಕಲಾಪಗಳ ಪಟ್ಟಿ</u>

## ಗುರುವಾರ, ದಿನಾಂಕ: 24ನೇ ಮಾರ್ಚ್, 2016

## (ಸಮಯ: ಬೆಳಗ್ಗೆ 10.00 ಗಂಟೆಗೆ)

******

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎಂಟನೆಯ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎಂಟನೆಯ ಪಟ್ಟಿ

### 02. ವರದಿಯನ್ನೊಪ್ಪಿಸುವುದು

**ಶ್ರೀ ಮರಿತಿಬ್ಬೇಗೌಡ (ಮಾನ್ಯ ಉಪಸಭಾಪತಿಗಳು ಹಾಗೂ ಅಧ್ಯಕ್ಷರು, ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿ)** ಅವರು ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿಯ ಎರಡನೆಯ ವರದಿಯನ್ನು ಒಪ್ಪಿಸುವುದು.

### 03. ಅರ್ಜಿಗಳನ್ನೊಪ್ಪಿಸುವುದು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ** ಅವರು:-

ಅ) ಉಡುಪಿ ಜಿಲ್ಲೆ, ಕುಂದಾಪುರ ತಾಲ್ಲೂಕು, ಸಿದ್ಧಾಪುರದಿಂದ ಶಂಕರನಾರಾಯಣ-ಹಾಲಾಡಿ-ಕಕ್ಕುಂಜೆ-ಬಿಲ್ಲಾಡಿ-ವಂಡೂರು-ಶಿರೂರು-ಮಂದಾರ್ತಿ ಮಾರ್ಗವಾಗಿ ಉಡುಪಿಗೆ ಸರ್ಕಾರಿ ಬಸ್ ಸೌಲಭ್ಯ ಒದಗಿಸುವ ಕುರಿತು ಹಾಗೂ

ಆ) ಉಡುಪಿ ಜಿಲ್ಲೆ, ಕುಂದಾಪುರ ತಾಲ್ಲೂಕಿನ ಕಂದಾಯ, ಪೌರಾಡಳಿತ ಹಾಗೂ ಸಮಾಜ ಕಲ್ಯಾಣ ಇಲಾಖೆಗಳ ಬೇಜವಾಬ್ದಾರಿ, ಅಧಿಕಾರ ದುರುಪಯೋಗದಿಂದ ಹಾಸ್ಟೆಲ್ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಗೆ ಆಗುತ್ತಿರುವ ಕಿರುಕುಳ ಹಾಗೂ ತೊಂದರೆ ಸರಿಪಡಿಸುವ ಬಗ್ಗೆ ಅರ್ಜಿಗಳನ್ನು ಒಪ್ಪಿಸುವುದು.

..2

## 04. ಶಾಸನ ರಚನೆ

### ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

**01. ಕರ್ನಾಟಕ ಲೋಕಸೇವಾ ಆಯೋಗ (ವ್ಯವಹಾರ ನಿರ್ವಹಣೆ ಮತ್ತು ಹೆಚ್ಚುವರಿ ಪ್ರಕಾರ್ಯಗಳು) (ತಿದ್ದುಪಡಿ) ವಿಧೇಯಕ, 2016**

**ಶ್ರೀ ಸಿದ್ಧರಾಮಯ್ಯ** (ಮಾನ್ಯ ಮುಖ್ಯಮಂತ್ರಿಗಳು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2016ನೇ ಸಾಲಿನ ಕರ್ನಾಟಕ ಲೋಕಸೇವಾ ಆಯೋಗ (ವ್ಯವಹಾರ ನಿರ್ವಹಣೆ ಮತ್ತು ಹೆಚ್ಚುವರಿ ಪ್ರಕಾರ್ಯಗಳು) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**02. ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2016**

**ಶ್ರೀ ಎಚ್.ಆಂಜನೇಯ,** (ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2016ನೇ ಸಾಲಿನ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**03. ಬಾಲ್ಯ ವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ) ವಿಧೇಯಕ, 2016**

**ಶ್ರೀಮತಿ ಉಮಾಶ್ರೀ** (ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2016ನೇ ಸಾಲಿನ ಬಾಲ್ಯ ವಿವಾಹ ನಿಷೇಧ(ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 05. ವಿತ್ತೀಯ ಕಾರ್ಯಕಲಾಪ

2016-2017ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಚರ್ಚೆ.

(ಎರಡನೇ ದಿನ)

## 06. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀ ಬಸವರಾಜ ಹೊರಟ್ಟಿ** ಅವರು ಸರ್ಕಾರಿ ಅನುದಾನಿತ ಪ್ರೌಢಶಾಲೆಗಳಲ್ಲಿ ಅನುಮತಿ ನೀಡುವ ರೀತ್ಯಾ ರಾಜ್ಯದ ಅನುದಾನಿತ ಪದವಿ ಕಾಲೇಜುಗಳಲ್ಲಿ ಕಳೆದ 9 ವರ್ಷಗಳಿಂದ ನಿವೃತ್ತಿ, ನಿಧನ, ರಾಜೀನಾಮೆ ಹಾಗೂ ಬಡ್ತಿಯಿಂದ ತೆರವಾದ ಹುದ್ದೆಗಳನ್ನು ದಿನಾಂಕ: 31.12.2012ರವರೆಗೆ ಭರ್ತಿಗೊಳಿಸಲು ಅನುಮತಿ ನೀಡುವ ಮೂಲಕ ಪದವಿ ಕಾಲೇಜಿನಲ್ಲಿ ಕುಸಿಯುತ್ತಿರುವ ಶೈಕ್ಷಣಿಕ ಗುಣಮಟ್ಟ ಕಾಪಾಡುವ ಕುರಿತು **ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರ** ಗಮನ ಸೆಳಯುವುದು.

**ಆ) ಶ್ರೀ ಕೆ.ಸಿ.ಕೊಂಡಯ್ಯ** ಅವರು ಹೈದರಾಬಾದ್ ಕರ್ನಾಟಕ ಜಿಲ್ಲೆಗಳಲ್ಲಿ ದ್ವಿಚಕ್ರ ವಾಹನ ಸವಾರರಿಗೆ ಹೆಲ್ಮೆಟ್ ಧರಿಸುವುದಕ್ಕೆ ವಿನಾಯಿತಿ ನೀಡುವ ಕುರಿತು **ಮಾನ್ಯ ಸಾರಿಗೆ ಸಚಿವರ** ಗಮನ ಸೆಳೆಯುವುದು.

**ಇ) ಶ್ರೀ ಎಂ.ಕೆ.ಪ್ರಾಣೇಶ್** ಅವರು ಚಿಕ್ಕಮಗಳೂರು ಜಿಲ್ಲೆ, ಮೂಡಿಗೆರೆ ತಾಲ್ಲೂಕಿನ ಕಳಸಾ ಹೋಬಳಿ, ನೆಲ್ಲಿಬಿಡು ಮತ್ತು ಕಳಸಾ ಪಟ್ಟಣದ ಕುಡಿಯುವ ನೀರಿನ ಯೋಜನೆಯ ಕಾಮಗಾರಿಯು ಅರ್ಧಕ್ಕೆ ಸ್ಥಗಿತಗೊಂಡಿರುವ ಕುರಿತು **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ** ಗಮನ ಸೆಳಯುವುದು.

## 07. ನಿಯಮ 330ರ ಮೇರೆಗೆ

**ಅ) ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ** ಅವರು ಬಾಗಲಕೋಟೆ ಜಿಲ್ಲೆ, ಬಾದಾಮಿ ತಾಲ್ಲೂಕಿನ ಶಿವಯೋಗ ಮಂದಿರದಲ್ಲಿ ಜವಾರಿ ಆಕಳುಗಳ ಗೋಮೂತ್ರದಿಂದ **"ಅರ್ಕ"** ತಯಾರಿಸುವ ಚಿಕ್ಕ ಉದ್ದಿಮೆಯನ್ನು ಸ್ಥಾಪಿಸುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಸಣ್ಣ ಕೈಗಾರಿಕೆ ಸಚಿವರು)**

**ಆ) ಶ್ರೀ ಡಿ.ಎಸ್.ವೀರಯ್ಯ** ಅವರು ರಾಜ್ಯದಲ್ಲಿ 2015ನೇ ಸಾಲಿನ "ಜೀತ ಪದ್ಧತಿ ಪರಿಶೀಲನಾ ಸಮಿತಿ"ಯ ವರದಿಯನ್ನು ಪರಾಮರ್ಶಿಸುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)**

## 08. ಖಾಸಗಿ ಸದಸ್ಯರ ಕಾರ್ಯಕಲಾಪಗಳು

### ಅ. ಖಾಸಗಿ ವಿಧೇಯಕ

**ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕ, 2015:-**

ಅ) **ಶ್ರೀ ಬಸವರಾಜ ಹೊರಟ್ಟಿ** ಅವರು 2015ನೇ ಸಾಲಿನ ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

## ಆ. ಖಾಸಗಿ ಸದಸ್ಯರ ನಿರ್ಣಯ

**ಶ್ರೀ ಸಿ.ಹೆಚ್. ವಿಜಯಶಂಕರ್, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು ಈ ಕೆಳಕಂಡ ಖಾಸಗಿ ನಿರ್ಣಯವನ್ನು ಮಂಡಿಸುವುದು:–**

"ರಾಜ್ಯ ರಾಜ್ಯಗಳ ಮಧ್ಯೆ ಇರುವ ನೀರಿಗಾಗಿ ಸಂಘರ್ಷ ಕೊನೆಗಾಣಿಸಲು, ಇಡೀ ಭಾರತದ ಸರ್ವಾಂಗೀಣ ಅಭಿವೃದ್ಧಿಗಾಗಿ ಈ ದೇಶದಲ್ಲಿ ಲಭ್ಯವಿರುವ ಹನಿಹನಿ ನೀರಿನ ಸಮರ್ಪಕ ಬಳಕೆ ಹಾಗೂ ನಮ್ಮಲ್ಲಿ ಅಪಾರ ಪ್ರಮಾಣದಲ್ಲಿರುವ ಜಲಸಂಪನ್ಮೂಲದ ಸದ್ಬಳಕೆ ಅನಿವಾರ್ಯವಾಗಿರುವ ಕಾರಣ ಉತ್ತರ ಭಾರತದ ನದಿಗಳನ್ನು ದಕ್ಷಿಣ ಭಾರತದ ನದಿಗಳೊಂದಿಗೆ ಜೋಡಿಸುವ ಅಂದರೆ ಗಂಗಾ–ಕಾವೇರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಕೇಂದ್ರ ಯೋಚಿಸಿದಲ್ಲಿ ಕೇಂದ್ರ ಸರ್ಕಾರ ತೆಗೆದುಕೊಳ್ಳುವ ಎಲ್ಲಾ ರೀತಿಯ ತೀರ್ಮಾನಗಳಿಗೂ ರಾಜ್ಯ ಸಕಾರಾತ್ಮಕವಾಗಿ ಸ್ಪಂದಿಸಲು ಬದ್ಧವಾಗಿದೆ ಎಂದು ಘೋಷಿಸುವುದಲ್ಲದೆ ಈ ಯೋಜನೆಯನ್ನು ಆದಷ್ಟು ಬೇಗ ಜಾರಿಗೊಳಿಸಲು ಕೇಂದ್ರ ಸರ್ಕಾರವನ್ನು ಈ ಸದನವು ಒತ್ತಾಯಿಸುತ್ತದೆ."

**ವಿ. ಶ್ರೀಶ್**
**ಕಾರ್ಯದರ್ಶಿ**

---